ಕರ್ನಾಟಕ ಸರ್ಕಾರ

ನಂ : ಎಎಲ್ಎನ್ [ಎ] [ಎ] ಎಸ್ಆರ್ 198/2006-07

ಜಿಲ್ಲಾಧಿಕಾರಿಗಳ ಕಾರ್ಯಾಲಯ,
ಬೆಂಗಳೂರು ಜಿಲ್ಲೆ ,
ಬೆಂಗಳೂರು, ದಿನಾಂಕ : 15.10.2008.

## ಅ ಧಿ ಕೃ ತ ಜ್ಞಾ ಪ ನ

ವಿಷಯ : ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ಬೊಮ್ಮಸಂದ್ರ ಗ್ರಾಮದ ಸರ್ವೆ ನಂ : 72 ರಲ್ಲಿ 3-00 ಎಕರೆ ವಿಸ್ತೀರ್ಣದ ಜಮೀನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಮತ್ತು 2-26 ಎಕರೆ / ಗುಂಟೆ ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಣಿಜ್ಯ ಉದ್ದೇಶಕ್ಕೆ ಭೂ ಪರಿವರ್ತನೆ ಕೋರಿ ಶ್ರೀಮತಿ ಕೆ. ಟಿ. ಇಂದಿರಾ ಕೋಂ ಕೆ. ಎಂ. ತಿಮ್ಮಯ್ಯ, ಪರವಾಗಿ ಜಿ.ಪಿ.ಎ. ಹೋಲ್ಡರ್ ಕೆ. ಎಂ. ತಿಮ್ಮಯ್ಯ, ಸೋಮವಾರಪೇಟೆ, ಕೂರ್ಗ್ ಜಿಲ್ಲೆ. ರವರು ಸಲ್ಲಿಸಿರುವ ಅರ್ಜಿ ದಿನಾಂಕ : 2.6.2006.

ಉಲ್ಲೇಖ :
1. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 7 ಎಲ್‌ಜಿಪಿ 1995, ದಿನಾಂಕ : 7.6.1999.
2. ಸರ್ಕಾರದ ಸುತ್ತೋಲೆ ಸಂಖ್ಯೆ : ಆರ್‌ಡಿ 56 ಎಲ್‌ಜಿಪಿ 2008, ದಿನಾಂಕ : 10.9.2008 & 24.9.2008.
3. ತಹಶೀಲ್ದಾರ್, ಆನೇಕಲ್ ತಾಲ್ಲೂಕು, ಆನೇಕಲ್ ರವರ ವರದಿ ನಂ : ಎಎಲ್ಎನ್ ಎಸ್ಆರ್ 82/2006-07, ದಿನಾಂಕ : 3.6.2006.
4. ಭೂ ಪರಿವರ್ತನಾ ಶುಲ್ಕ ರೂ. 1,63,350-00 ಮತ್ತು 4,61,736-00 ಹಾಗೂ ಪೋಡಿ ಶುಲ್ಕ ರೂ. 55-00 ಸೇರಿ ಒಟ್ಟು ರೂ. 6,25,141-00ಗಳನ್ನು ಚಲನ್ ದಿನಾಂಕ : 19.7.2006 ರಂತೆ ಖಜಾನೆಗೆ ಅರ್ಜಿದಾರರು ಜಮಾ ಮಾಡಿರುತ್ತಾರೆ.
5. ಏಕಗವಾಕ್ಷಿ ಸಮಿತಿ ಸಭೆಯ ನಡವಳಿ ದಿನಾಂಕ : 4.7.2006.

% % % % % %

ಕರ್ನಾಟಕ ಭೂ ಕಂದಾಯ ಅಧಿನಿಯಮ 1964 ರ ಕಲಂ 95[2], 95[4] ಮತ್ತು 95[7] ರ ಷರತ್ತುಗಳು, ಹಾಗೂ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಕರ್ನಾಟಕ ಭೂ ಕಂದಾಯ [ತಿದ್ದುಪಡಿ] ನಿಯಮಗಳು 1994ರ ನಿಯಮ 107[1] ರಂತೆ ಎಕರೆ ಒಂದಕ್ಕೆ ರೂ 54,450-00 [ಐವತ್ತು ನಾಲ್ಕು ಸಾವಿರದ ನಾಲ್ಕು ನೂರ ಐವತ್ತು ರೂ. ಗಳು ಮಾತ್ರ] 1,74,240-00 [ಒಂದು ಲಕ್ಷದ ಎಪ್ಪತ್ತು ನಾಲ್ಕು ಸಾವಿರದ ಇನ್ನೂರ ನಲವತ್ತು] ಗಳಂತೆ ಅರ್ಜಿದಾರರು ಉಲ್ಲೇಖ [4] ರಲ್ಲಿ ನಮೂದಿಸಿರುವಂತೆ ಹಣವನ್ನು ಜಮಾ ಮಾಡಿ ಚಲನ್‌ನ್ನು ಹಾಜರು ಪಡಿಸಿರುವ ಮೇರೆಗೆ ಅರ್ಜಿದಾರರಾದ ಶ್ರೀಮತಿ ಕೆ. ಟಿ. ಇಂದಿರಾ ಕೋಂ ಕೆ. ಎಂ. ತಿಮ್ಮಯ್ಯ, ಪರವಾಗಿ ಜಿ.ಪಿ.ಎ. ಹೋಲ್ಡರ್ ಕೆ. ಎಂ. ತಿಮ್ಮಯ್ಯ, ಸೋಮವಾರಪೇಟೆ, ಕೂರ್ಗ್ ಜಿಲ್ಲೆ. ರವರ ಅರ್ಜಿಯನ್ನು ಪರಿಗಣಿಸಿ ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ಬೊಮ್ಮಸಂದ್ರ ಗ್ರಾಮದ ಸರ್ವೆ ನಂ : 72 ರಲ್ಲಿ 3-00 ಎಕರೆ ವಿಸ್ತೀರ್ಣದ ಜಮೀನ್ನು ವ್ಯವಸಾಯೇತರ ವಾಸದ ಉದ್ದೇಶಕ್ಕೆ ಮತ್ತು 2-26 ಎಕರೆ / ಗುಂಟೆ , ವಿಸ್ತೀರ್ಣದ ವ್ಯವಸಾಯದ ಜಮೀನನ್ನು ವ್ಯವಸಾಯೇತರ ವಾಸದ / ವಾಣಿಜ್ಯ ಉದ್ದೇಶಕ್ಕೆ ಬಳಸಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಭೂ ಪರಿವರ್ತನಾ ಆದೇಶವನ್ನು ಹೊರಡಿಸಲಾಗಿದೆ.

1. ಈ ಭೂಮಿಯು ಯಾವ ಉದ್ದೇಶಕ್ಕಾಗಿ ಪರಿವರ್ತನೆಯಾಗಿದೆಯೋ ಆ ಉದ್ದೇಶಕ್ಕೆ ಉಪಯೋಗಿಸಿಕೊಳ್ಳಲು ಸಕ್ಷಮ ಪ್ರಾಧಿಕಾರಿಯಿಂದ ಅಂದರೆ, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಎ.ಸಿ.ಎ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ** ಮಂಜೂರಾತಿಯನ್ನು ಪಡೆಯದ ಹೊರತು ಈ ಆದೇಶವು ಅನುಭವದಾರನಿಗೆ ಯಾವುದೇ ಹಕ್ಕನ್ನು ನೀಡುವುದಿಲ್ಲ.
2. ಈ ಪರಿವರ್ತಿತ ಜಮೀನನ್ನು ವಾಣಿಜ್ಯ ಉದ್ದೇಶಕ್ಕೆ ಮಾತ್ರ ಉಪಯೋಗಿಸಿಕೊಳ್ಳತಕ್ಕದ್ದು. ಈ ಜಮೀನನ್ನು ಪೂರ್ವಾನುಮತಿ ಇಲ್ಲದೆ ಬೇರೆ ಉದ್ದೇಶಕ್ಕಾಗಿ ಉಪಯೋಗಿಸಿಕೊಳ್ಳಬಾರದು.
3. ಈ ಜಮೀನಿನಲ್ಲಿ ಉದ್ದೇಶಿಸಿರುವ ಬಡಾವಣೆ ನಕ್ಷೆ ಹಾಗೂ ಪರವಾನಗಿ ಇತ್ಯಾದಿಗಳನ್ನು ಆಯುಕ್ತರು, **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಎ.ಸಿ.ಎ.ಪಿ.ಎ** : ಪ್ರಾಧಿಕಾರದಿಂದ ಅನುಮೋದಿಸಿಕೊಂಡು ಆ ನಂತರ ಅನುಮೋದನೆಗೊಂಡ ನಕ್ಷೆಗೆ ಅನುಗುಣವಾಗಿ ಕಟ್ಟಡವನ್ನು ಕಟ್ಟುವುದು. ಸದರಿ ಜಮೀನಿನಲ್ಲಿ ಲೇಔಟ್ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯದೆ ಪರಭಾರೆ ಮಾಡಕೂಡದು.
4. ಇತರೆ ಅವಶ್ಯವಾದ ರಸ್ತೆ ಜಾಗ, ರಸ್ತೆ ಮಾರ್ಜಿನ್, ಖಾಲಿ ಜಾಗ ಇತ್ಯಾದಿಗಳನ್ನು **ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ : ಬಿ.ಎಂ.ಆರ್.ಡಿ.ಎ. [ಸ್ಥಳೀಯ ಯೋಜನಾ ಪ್ರಾಧಿಕಾರ] : ಬಿ.ಎಂ.ಎ.ಸಿ.ಎ.ಪಿ.ಎ : ಮಾಲಿನ್ಯ ನಿಯಂತ್ರಣಾ ಮಂಡಳಿ** ಪ್ರಾಧಿಕಾರದಿಂದ ಅನುಮೋದಿಸಿದ ಬಡಾವಣೆ ನಕ್ಷೆ ಪ್ರಕಾರ ಹಾಗೂ ನಿರ್ದಿಷ್ಟಪಡಿಸಿದ ನಿಯಮಗಳ ರೀತ್ಯ ಸದರಿ ಉದ್ದೇಶಕ್ಕೆ ಕಾಯ್ದಿರಿಸತಕ್ಕದ್ದು.
5. **ಸಂಬಂಧಪಟ್ಟ ಪ್ರಾಧಿಕಾರದಿಂದ** ಅನುಮೋದಿತ ನಕ್ಷೆ ಪಡೆಯದೇ ನಿವೇಶನಗಳನ್ನು / **ಕಟ್ಟಡಗಳನ್ನು ಸಂಬಂಧಪಟ್ಟ** ನೋಂದಣಾಧಿಕಾರಿಗಳಿಂದ / ಉಪ ನೋಂದಣಾಧಿಕಾರಿಗಳಿಂದ ನೋಂದಾವಣೆ ಮಾಡತಕ್ಕದ್ದಲ್ಲ. ಖಾತೆದಾರರು ಒಂದು **ವೇಳೆ ಭೂ ಪರಿವರ್ತನೆ ಮಂಜೂರು ಮಾಡಿರುವ ಜಮೀನಿನ** ಪೂರ್ಣ ವಿಸ್ತೀರ್ಣವನ್ನು ಮಾರಾಟ ಮಾಡಲು ಉದ್ದೇಶಿಸಿದಲ್ಲಿ ಈ ಆದೇಶ ಅಡ್ಡಿ ಬರುವುದಿಲ್ಲ.
6. ಸಾರ್ವಜನಿಕ ಹಿತದೃಷ್ಟಿಯಿಂದ ಸದರಿ ಜಮೀನಿನಲ್ಲಿ ನಿವೇಶನದಾರರಿಗೆ ನಾಗರೀಕ ಸೌಲಭ್ಯಗಳಾದ ವಿದ್ಯುಚ್ಛಕ್ತಿ, ನೀರು

7. ಈ ಜಮೀನಿಗೆ ತಾಕು ಫೋಟು ಖರಾಬ್ ಜಮೀನಿದ್ದಲ್ಲಿ ಕರ್ನಾಟಕ ಭೂ ಕಂದಾಯ ಕಾಯ್ದೆ 1964 ರ ಕಲಂ 67 ರಂತೆ ಸರ್ಕಾರದ ಉದ್ದೇಶಕ್ಕಾಗಿ ಕಾಯ್ದಿರಿಸತಕ್ಕದ್ದು. ಉಳಿದ ವಿಸ್ತೀರ್ಣ ಭೂ ಪರಿವರ್ತನೆಗೆ ಒಳಪಟ್ಟಿರುವ ಜಮೀನನ್ನು ಉದ್ದೇಶಕ್ಕಾಗಿ ಬಳಸಲು ಭೂ ಪರಿವರ್ತನೆ ನೀಡಿದೆ. ಬಿ ಖರಾಬು ವಿಸ್ತೀರ್ಣದ ಜಮೀನನ್ನು ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಲಾಗಿದೆ. ಈ ವಿಸ್ತೀರ್ಣದ ಮೇಲೆ ಅರ್ಜಿದಾರರಿಗೆ ಯಾವುದೇ ಹಕ್ಕು ಇರುವುದಿಲ್ಲ. ಈ ಬಿ ಖರಾಬಿನ ವಿಸ್ತೀರ್ಣದ ಹಕ್ಕು ಯಾವಾಗಲೂ ಸರ್ಕಾರಕ್ಕೆ ಸೇರಿರುತ್ತದೆ. ತಹಸೀಲ್ದಾರ್‌ರವರು ಈ ಬಾಬ್ತು ಆರ್.ಟಿ.ಸಿ.ಯಲ್ಲಿ ಸ್ಪಷ್ಟವಾಗಿ ನಮೂದಿಸತಕ್ಕದ್ದು.

8. ಸರ್ಕಾರದ ಆದೇಶ ಸಂಖ್ಯೆ : ಪಿಡಬ್ಲ್ಯೂಡಿ 7556-66 ಆರ್ ಮತ್ತು ಬಿ-6-54-5 ಮತ್ತು ಕೇಂದ್ರ ಸರ್ಕಾರದ ಸಾರಿಗೆ ಇಲಾಖೆಯ ಪತ್ರದ ಸಂಖ್ಯೆ ಪಿ1/7.11/67 ದಿನಾಂಕ 1.1.1966 ರಂತೆ ಈ ಜಮೀನಿನಲ್ಲಿ ಕಟ್ಟಲು ಉದ್ದೇಶಿಸಿರುವ ಕಟ್ಟಡವು ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 40 ಮೀಟರ್‌ಗಳ ಅಂತರವನ್ನು ಮತ್ತು ಜಿಲ್ಲಾ ಹೆದ್ದಾರಿಗೆ ಸಂಬಂಧಿಸಿದಂತೆ, ರಸ್ತೆಯ ಮಧ್ಯ ಭಾಗದಿಂದ 25 ಮೀಟರ್‌ಗಳ ಅಂತರವನ್ನು ಕಾದಿರಿಸಬೇಕು ಹಾಗೂ ಈ ಖಾಲಿ ಪ್ರದೇಶದಲ್ಲಿ ಯಾವುದೇ ಕಟ್ಟಡವನ್ನು ಕಟ್ಟಬಾರದು.

9. ಭೂ ಪರಿವರ್ತನೆ ಮಂಜೂರಿ ಯಾವ ಉದ್ದೇಶಕ್ಕೆ ಆಗಿರುತ್ತದೆಯೋ ಅದೇ ಉದ್ದೇಶಕ್ಕೆ ಈ ದಿನದಿಂದ ಎರಡು ವರ್ಷಗಳ ಒಳಗಾಗಿ ಉಪಯೋಗಿಸತಕ್ಕದ್ದು.

10. ಈ ಭೂ ಪರಿವರ್ತನಾ ಜಮೀನಿನಲ್ಲಿ ಸ್ಥಾಪಿಸಲಾಗುವ ಕೈಗಾರಿಕಾ ಘಟಕಗಳು ಹೊರದೂಡುವ ಹೊಗೆ, ಅನಿಲ, ಇತರೆ ಕಲ್ಮಶಗಳನ್ನು ಪರಿಣಾಮಕಾರಿಯಾಗಿ ತಡೆಗಟ್ಟಿ ಸಾರ್ವಜನಿಕರ ಆರೋಗ್ಯಕ್ಕೆ ಯಾವುದೇ ರೀತಿಯ ಹಾನಿಯಾಗದಂತೆ ಹಾಗೂ ಪರಿಸರ ಮಾಲಿನ್ಯವಾಗದಂತೆ ನೋಡಿಕೊಳ್ಳತಕ್ಕದ್ದು. ಕೈಗಾರಿಕಾ ಉದ್ದೇಶಕ್ಕಾಗಿ ಭೂ ಪರಿವರ್ತಿತ ಜಮೀನಿನಲ್ಲಿ ಸ್ಥಾಪಿಸುವ ಕೈಗಾರಿಕಾ ಘಟಕಗಳು ಕರ್ನಾಟಕ ಮಾಲಿನ್ಯ ನಿಯಂತ್ರಣ ಮಂಡಳಿ / ಪರಿಸರ ಇಲಾಖೆಗೆ ಅನುಮತಿ ಹೊಂದಿರತಕ್ಕದ್ದು.

11. ಈ ಆದೇಶವು ಸದರಿ ಜಮೀನಿಗೆ ಸಂಬಂಧಪಟ್ಟಂತೆ ಯಾವುದೇ ನ್ಯಾಯಾಲಯದಲ್ಲಿನ ದಾವೆ / ರಿಟ್ ಅರ್ಜಿ / ಮೇಲ್ಮನವಿಯ ತೀರ್ಪಿಗೆ ಒಳಪಟ್ಟಿರುತ್ತದೆ.

12. ಪ್ರಸ್ತಾಪಿತ ಜಮೀನಿನ ಬಗ್ಗೆ ಯಾವುದೇ ಭೂ ಸ್ವಾಧೀನ ಪ್ರಕ್ರಿಯೆಗೆ ಒಳಪಟ್ಟದಲ್ಲಿ ಈ ಪ್ರಾಧಿಕಾರವು ಜವಾಬ್ದಾರಿಯಾಗುವುದಿಲ್ಲ.

13. ಮೇಲ್ಕಂಡ ಯಾವುದೇ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ, ಈ ಭೂ ಪರಿವರ್ತನೆ ಆದೇಶ ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಕರ್ನಾಟಕ ಭೂ ಕಂದಾಯ ಕಾಯಿದೆ 1964 ರ ಕಲಂ 96 ರಂತೆ ದಂಡ ಶುಲ್ಕವನ್ನು ವಿಧಿಸಲು ಮುಂದಿನ ಕ್ರಮ ತೆಗೆದುಕೊಳ್ಳಲಾಗುವುದು ಅಲ್ಲದೇ ಈ ಜಮೀನಿನಲ್ಲಿ ಅನಧಿಕೃತವಾಗಿ ಕಟ್ಟಿದ ಕಟ್ಟಡಗಳನ್ನು ಯಾವುದೇ ಪರಿಹಾರ ನೀಡದೆ ಕೆಡವಲು ಕ್ರಮ ತೆಗೆದುಕೊಳ್ಳಲಾಗುವುದು ಹಾಗು ಅದಕ್ಕೆ ತಗಲುವ ವೆಚ್ಚವನ್ನು ಭೂ ಕಂದಾಯ ಬಾಕಿ ಎಂದು ಖಾತೆದಾರರಿಂದ ವಸೂಲಿ ಮಾಡಲಾಗುವುದು.

<u>ಷೆಡ್ಯೂಲ್ ವಿವರ</u>

ಬೆಂಗಳೂರು ಜಿಲ್ಲೆ, ಆನೇಕಲ್ ತಾಲ್ಲೂಕು, ಅತ್ತಿಬೆಲೆ ಹೋಬಳಿ, ಬೊಮ್ಮಸಂದ್ರ ಗ್ರಾಮದ ಸರ್ವೆ ನಂ : 72 ರಲ್ಲಿ 1-00 ಎಕರೆ ವಿಸ್ತೀರ್ಣದ ಜಮೀನನ್ನು ವ್ಯವಸಾಯೇತರ ವಸತಿ ಉದ್ದೇಶಕ್ಕೆ ಮತ್ತು 2-26 ಎಕರೆ / ಗುಂಟೆ ವಿಸ್ತೀರ್ಣಕ್ಕೆ ಭೂ ಪರಿವರ್ತಿತ ಜಮೀನಿಗೆ ಚೆಕ್ಕುಬಂದಿ :

ಗ್ರಾಮ : ಬೊಮ್ಮಸಂದ್ರ

| | | |
|---|---|---|
| ಪೂರ್ವಕ್ಕೆ | : | ಸರ್ವೆ ನಂ : 11 & 12 |
| ಪಶ್ಚಿಮಕ್ಕೆ | : | ಕಮ್ಮಸಂದ್ರ ಗಡಿ & ಸರ್ವೆ ನಂ : 71 |
| ಉತ್ತರಕ್ಕೆ | : | ಸರ್ವೆ ನಂ : 73 |
| ದಕ್ಷಿಣಕ್ಕೆ | : | ಸರ್ವೆ ನಂ : 71 & 13 |

ಸಹಿ/-
(ಹೆಚ್. ರಾಮಾಂಜನೇಯ)
ವಿಶೇಷ ಜಿಲ್ಲಾಧಿಕಾರಿ [ಕಂದಾಯ],
ಬೆಂಗಳೂರು ಜಿಲ್ಲೆ, ಬೆಂಗಳೂರು.

ಪ್ರತಿಯನ್ನು ಮುಂದಿನ ಸೂಕ್ತ ಕ್ರಮಕ್ಕಾಗಿ ಕೆಳಕಂಡವರಿಗೆ ಕಳುಹಿಸಿದೆ.

1. ತಹಸೀಲ್ದಾರ್, ಆನೇಕಲ್ ತಾಲ್ಲೂಕು, ಆನೇಕಲ್ ರವರಿಗೆ ಮೂಲ ಕಡತ ಹಾಗೂ ಚಲನ್‌ನೊಂದಿಗೆ ಕಳುಹಿಸುತ್ತಾ ಈ ಆದೇಶದ ಪ್ರಕಾರ ಸಂಬಂಧಪಟ್ಟ ಸರ್ವೆ ನಂಬರ್ ಭೂ ಪರಿವರ್ತನೆಯಾಗಿದೆ ಎಂದು ಸಂಬಂಧಪಟ್ಟ ಗ್ರಾಮಲೆಕ್ಕದ ಆರ್.ಟಿ.ಸಿ.ಯಲ್ಲಿ ನಮೂದಿಸತಕ್ಕದ್ದು ಮತ್ತು ಈ ಜಮೀನಿಗೆ ಖಾತೇದಾರರ ಲೆಕ್ಕದಲ್ಲಿ ಸದರ ಜಮೀನಿನ ಭೂ ಕಂದಾಯವನ್ನು ಕಡಿಮೆಗೊಳಿಸಲಾಗುವುದು.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ, ಬೆಂಗಳೂರು ರವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
3. ಉಪವಿಭಾಗಾಧಿಕಾರಿಗಳು ಬೆಂಗಳೂರು ದಕ್ಷಿಣ ಉಪವಿಭಾಗ, ಬೆಂಗಳೂರು.
4. ಉಪನಿರ್ದೇಶಕರು, ಭೂ ಮಾಪನ ಮತ್ತು ಭೂ ದಾಖಲೆಗಳ ಇಲಾಖೆ, ಬೆಂಗಳೂರು ಉಪವಿಭಾಗ, ಬೆಂಗಳೂರು.
5. ಉಪ ನೋಂದಣಾಧಿಕಾರಿಗಳು, ಅತ್ತಿಬೆಲೆ ಹೋಬಳಿ, ಆನೇಕಲ್ ತಾಲ್ಲೂಕು, ಬೆಂಗಳೂರು ಇವರಿಗೆ ಮಾಹಿತಿಗಾಗಿ.
6. ಅರ್ಜಿದಾರರಾದ ಶ್ರೀಮತಿ ಕೆ. ಟಿ. ಇಂದಿರಾ ಕೋಂ ಕೆ ಎಂ. ತಿಮ್ಮಯ್ಯ ಪರವಾಗಿ ಜಿ.ಪಿ.ಎ ಹೋಲ್ಡರ್ ಕೆ ಎಂ. ತಿಮ್ಮಯ್ಯ, ಸೋಮವಾರಪೇಟೆ, ಕೂರ್ಗ್ ಜಿಲ್ಲೆ ರವರಿಗೆ ವ್ಯಕ್ತಿಗತ ಅಂಚೆ ಮೂಲಕ.
6. ಹೆಚ್ಚಿನ ಪ್ರತಿ.
7.

ವಿಶೇಷ ಜಿಲ್ಲಾಧಿಕಾರಿ [ಕಂದಾಯ],